**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:-** ಸಹಕಾರ ಸಂಘಗಳ ಮತ್ತು ಸೌಹಾರ್ದ ಸಹಕಾರಿಗಳ 2019-20 ನೇ ಸಾಲಿನ ವಾರ್ಷಿಕ ಲೆಕ್ಕಪರಿಶೋಧನಾ ವರದಿಯನ್ನು ಸಲ್ಲಿಸಲು ಕಾಲಾವಧಿಯನ್ನು ವಿಸ್ತರಣೆ ಮಾಡುವ ಕುರಿತು.

**ಓದಲಾಗಿದೆ:-1** ಸರ್ಕಾರದ ಆದೇಶ ಸಂಖ್ಯೆ:ಸಇ 33 ಸಿಎಲ್ಎಮ್ 2020 (ಇ), ದಿನಾಂಕ:17.04.2020

2 ಸರ್ಕಾರದ ಆದೇಶ ಸಂಖ್ಯೆ:ಸಇ 34 ಸಿಎಲ್ಎಮ್ 2020 (ಇ), ದಿನಾಂಕ:17.04.2020

3 ಸರ್ಕಾರದ ಆದೇಶ ಸಂಖ್ಯೆ:ಸಇ 43 ಸಿಎಲ್ಎಮ್ 2020 (ಇ), ದಿನಾಂಕ:24.06.2020

4 ಸರ್ಕಾರದ ಆದೇಶ ಸಂಖ್ಯೆ:ಸಇ 44 ಸಿಎಲ್ಎಮ್ 2020 (ಇ), ದಿನಾಂಕ:08.07.2020

5 ಸಹಕಾರ ಸಂಘಗಳ ಲೆಕ್ಕಪರಿಶೋಧನಾ ನಿರ್ದೇಶಕರು, ಕರ್ನಾಟಕ ರಾಜ್ಯ ಬೆಂಗಳೂರು ಇವರ ಪತ್ರ ಸಂಖ್ಯೆ: ಲೆಪಶಾ/ಇತರೆ/ಸಸಂಲೆಪನಅವಿ/02/2020-21, ದಿನಾಂಕ:20.10.2020

*****

**ಪ್ರಸ್ತಾವನೆ:**

ಮೇಲೆ ಓದಲಾದ (1) ಮತ್ತು (2) ರಲ್ಲಿ ಕರ್ನಾಟಕ ಸಹಕಾರ ಸಂಘಗಳ (ತಿದ್ದುಪಡಿ) ಕಾಯ್ದೆ-2012ರ ಕಲಂ 63(8) ಹಾಗೂ ನಿಯಮ 29(ಬಿ)7 ರನ್ವಯ ಮತ್ತು ಕರ್ನಾಟಕ ಸೌಹಾರ್ದ ಸಹಕಾರಿ ತಿದ್ದುಪಡಿ ಕಾಯ್ದೆ 2013 ರ ಕಲಂ 33(8) ರನ್ವಯ ಲೆಕ್ಕ ಪರಿಶೋಧಕರು ಸಂಘಕ್ಕೆ, ಸಹಕಾರ ಸಂಘಗಳ ನಿಬಂಧಕರಿಗೆ, ಸಹಕಾರ ಸಂಘಗಳ ಲೆಕ್ಕ ಪರಿಶೋಧನಾ ನಿರ್ದೇಶಕರಿಗೆ ಹಾಗೂ ಆರ್ಥಿಕ ಸಹಾಯ ಒದಗಿಸುವ ಸಂಸ್ಥೆಗಳಿಗೆ ಲೆಕ್ಕ ಪರಿಶೋಧನಾ ವರದಿಯನ್ನು 1ನೇ ಸೆಪ್ಟಂಬರ್ ಒಳಗಾಗಿ ಸಲ್ಲಿಸಬೇಕಾದ ಅವಧಿಯನ್ನು 1ನೇ ನವೆಂಬರ್‌ವರೆಗೆ ವಿಸ್ತರಿಸಿ ಆದೇಶಿಸಲಾಗಿರುತ್ತದೆ.

ಮೇಲೆ ಓದಲಾದ (3) ಮತ್ತು (4) ರಲ್ಲಿ ರಾಜ್ಯದಲ್ಲಿ ಕೋವಿಡ್-19 ವ್ಯಾಪಕವಾಗಿ ಹರಡುತ್ತಿರುವುದರಿಂದ ಸಹಕಾರಿ ಸಂಘಗಳ ಮತ್ತು ಸೌಹಾರ್ದ ಸಹಕಾರಿಗಳ ವಾರ್ಷಿಕ ಮಹಾ ಸಭೆ ನಡೆಸುವ ಅವಧಿಯನ್ನು ವಿಸ್ತರಿಸಿ ಡಿಸೆಂಬರ್ 25, 2020 ರವರೆಗೆ ನಡೆಸಲು ಅನುಮತಿ ನೀಡಿ, ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959 ರ ಪ್ರಕರಣ 27ಬಿ ರನ್ವಯ ಹಾಗೂ ಕರ್ನಾಟಕ ಸೌಹಾರ್ದ ಸಹಕಾರಿ ಅಧಿನಿಯಮ 1997 ರ ಪ್ರಕರಣ 34 ಮತ್ತು 64ಎ ರೀತ್ಯಾ ವಿದ್ಯುಕ್ತ ವರದಿಗಳನ್ನು ಸಲ್ಲಿಸಲು 31ನೇ ಡಿಸೆಂಬರ್ 2020 ರ ವರೆಗೆ ಅವಧಿಯನ್ನು ವಿಸ್ತರಿಸಿ ಆದೇಶಿಸಲಾಗಿರುತ್ತದೆ.

ಮೇಲೆ ಓದಲಾದ (5)ರ ಪತ್ರದಲ್ಲಿ ನಿರ್ದೇಶಕರು, ಲೆಕ್ಕಪರಿಶೋಧನಾ ಇಲಾಖೆ ಇವರು ಸಹಕಾರ ಸಂಘಗಳ ವಾರ್ಷಿಕ ಮಹಾ ಸಭೆಯನ್ನು ನಡೆಸಲು ಡಿಸೆಂಬರ್ 25 ರವರೆಗೆ ಅವಧಿ ವಿಸ್ತರಿಸಿ ಆದೇಶಿಸಿರುವುದರಿಂದ, ಲೆಕ್ಕಪರಿಶೋಧನಾ ವರದಿಗಳನ್ನು ಸಲ್ಲಿಸಬೇಕಾದ ಅವಧಿಯನ್ನು ದಿನಾಂಕ:25.11.2020ರವರೆಗೆ ವಿಸ್ತರಿಸಬಹುದಾಗಿದೆ ಎಂದು ಅಭಿಪ್ರಾಯಿಸಿರುತ್ತಾರೆ.

ಪ್ರಸ್ತಾವನೆಯನ್ನು ಕೂಲಂಕುಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶವನ್ನು ಹೊರಡಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ: ಸಇ 76 ಸಿಎಲ್‌ಎಮ್ 2020 (ಇ) ಬೆಂಗಳೂರು, ದಿನಾಂಕ: 29.10.2020**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ, 1959ರ ಕಲಂ 121ರಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮ 1960 ರ ನಿಯಮ 29-ಬಿ(7) ಕ್ಕೆ ಹಾಗೂ ಕರ್ನಾಟಕ ಸೌಹಾರ್ದ ಸಹಕಾರಿ ಅಧಿನಿಯಮ, 1997ರ ಕಲಂ 70ರಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಕರ್ನಾಟಕ ಸೌಹಾರ್ದ ಸಹಕಾರಿ ಅಧಿನಿಯಮ, 1997ರ ಕಲಂ 33(8)ಕ್ಕೆ ವಿನಾಯಿತಿ ನೀಡಿ, ಸಹಕಾರ ಸಂಘಗಳ ಹಾಗೂ ಸೌಹಾರ್ದ ಸಹಕಾರಿಗಳ ಲೆಕ್ಕಪರಿಶೋಧನಾ ವರದಿಗಳನ್ನು ಲೆಕ್ಕಪರಿಶೋಧಕರು ಸಲ್ಲಿಸುವ ಕಾಲಾವಧಿಯನ್ನು ದಿನಾಂಕ:25.11.2020 ರವರೆಗೆ ವಿಸ್ತರಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

29/10/2020

**(ಮನೋರಮ.ಡಿ.ಸಿ)**
ಸರ್ಕಾರದ ಅಧೀನ ಕಾರ್ಯದರ್ಶಿ-3,
ಸಹಕಾರ ಇಲಾಖೆ.

**ಇವರಿಗೆ**

ಸಂಕಲನಕಾರರು ಕರ್ನಾಟಕ ರಾಜ್ಯಪತ್ರ ಬೆಂಗಳೂರು ಇವರಿಗೆ ಕರ್ನಾಟಕ ರಾಜ್ಯಪತ್ರದಲ್ಲಿ ಕೂಡಲೇ ಪ್ರಕಟಿಸಿ, ಅದರ 25 ಪ್ರತಿಗಳನ್ನು ಒದಗಿಸಲು ಕೋರಿದೆ.

**ಪ್ರತಿಗಳು: -**

1. ಮಹಾಲೇಖಪಾಲರು, (ಜಿ & ಎಸ್‌ಎಸ್‌ಎ), (ಇ & ಆರ್‌ಎಸ್‌ಎ), (ಎ&ಇ) ಕರ್ನಾಟಕ ಹೊಸ ಕಟ್ಟಡ ಆಡಿಟ್ ಭವನ ಅಂಚೆ ಪಟ್ಟಿಗೆ ಸಂಖ್ಯೆ:5398, ಬೆಂಗಳೂರು-01.
2. ಸಹಕಾರ ಸಂಘಗಳ ನಿಬಂಧಕರು, ನಂ.1, ಆಲಿ ಆಸ್ಕರ್ ರಸ್ತೆ, ಬೆಂಗಳೂರು-52.
3. ಸಹಕಾರ ಸಂಘಗಳ ಲೆಕ್ಕಪರಿಶೋಧನಾ ನಿರ್ದೇಶಕರು, ನಂ.17, ಜಯನಿವಾಸ, ಶಂಕರಮಠ ರಸ್ತೆ, ಬಸವನಗುಡಿ, ಬೆಂಗಳೂರು.
4. ಮಾನ್ಯ ಸಹಕಾರ ಸಚಿವರ, ಆಪ್ತ ಕಾರ್ಯದರ್ಶಿ ವಿಕಾಸ ಸೌಧ, ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಸಹಕಾರ ಇಲಾಖೆ ಬೆಂಗಳೂರು.
6. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿ., ಡಾ. ರಾಜ್‌ಕುಮಾರ್ ರಸ್ತೆ, ನಿರ್ಮಾಣ ಭವನ, ರಾಜಾಜಿನಗರ, ಬೆಂಗಳೂರು – 10.
7. ಕರ್ನಾಟಕ ರಾಜ್ಯ ಸನ್ನದು ಲೆಕ್ಕಪರಿಶೋಧಕರ ಅಸೋಸಿಯೇಷನ್, ನಂ.67, 1ನೇ ಮಹಡಿ, ವೆಸ್ಟ್ ಆಫ್ ಕಾರ್ಡ್ ರಸ್ತೆ, 2ನೇ ಹಂತ, ಮಹಾಲಕ್ಷ್ಮೀಪುರಂ, ಬೆಂಗಳೂರು – 86.
8. ಸರ್ಕಾರದ ಅಧೀನ ಕಾರ್ಯದರ್ಶಿ-3, ಸಹಕಾರ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
9. ಶಾಖಾ ರಕ್ಷಾ ಕಡತ ಹೆಚ್ಚುವರಿ ಪ್ರತಿ.